ಅ) ಜಿಲ್ಲಾಮಟ್ಟದ ಗ್ರಂಥಾಲಯಗಳಿಗೆ ಸ್ವಂತ ಕಟ್ಟಡಗಳಿಲ್ಲದೆ ಲಕ್ಷಾಂತರ ರೂಪಾಯಿಗಳನ್ನು ಬಾಡಿಗೆಗೆ ನೀಡುತ್ತಿರುವುದು ಹಾಗೂ ಪುಸ್ತಕಗಳನ್ನು ಇಡಲು ಸ್ಥಳ ಇಲ್ಲದೆ ಅವುಗಳು ಜೀರ್ಣವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಆ) ಹಾಗಿದ್ದಲ್ಲಿ ಇದರ ಬಗ್ಗೆ ಒಂದು ಮಾಸ್ಟರ್ ಪ್ಲಾನ್ ಮಾಡಿ ಎಲ್ಲಾ ಜಿಲ್ಲಾ ಕೇಂದ್ರಗಳಲ್ಲೂ ಒಂದೊಂದು ಜಿಲ್ಲಾ ಮಟ್ಟದ ಗ್ರಂಥ ಬಂಡಾರ ಕಟ್ಟಡಗಳನ್ನು ಕಟ್ಟಿಸಲು ಸರ್ಕಾರ ಕ್ರಮ ತೆಗೆದುಕೊಳ್ಳುವುದೇ?

ಶ್ರೀ ಕೆ. ಹೆಚ್. ರಂಗನಾಥ್ (ಶಿಕ್ಷಣ, ಯುವಜನ ಸೇವೆ, ಕ್ರೀಡೆ, ಕನ್ನಡ ಮತ್ತು ಸಂಸ್ಕೃತಿ ಮಂತ್ರಿಗಳು).—

ಅ) ಬಂದಿದೆ.

ಆ) ಆರ್ಥಿಕ ಅನುಕೂಲತೆಗಳನ್ನು ಗಮನದಲ್ಲಿಟ್ಟುಕೊಂಡು ಇದರ ಸಾಧ್ಯಾ ಸಾಧ್ಯತೆಗಳನ್ನು ಪರಿಶೀಲಿಸಲಾಗುವುದು.

ಪ್ರಾಥಮಿಕ, ಪ್ರೌಢ ಶಿಕ್ಷಣ ಪುಸ್ತಕದ ಬದಲಾವಣೆಯ ಬಗ್ಗೆ

೭೬೪(೧೪೧೭) ಶ್ರೀ ಶಿವಾನಂದ ಹೆಚ್. ಕೌಜಲಗಿ (ಬೈಲಹೊಂಗಲ).—ಮಾನ್ಯ ಶಿಕ್ಷಣ, ಯುವಜನ ಸೇವೆ, ಕ್ರೀಡೆ, ಕನ್ನಡ ಹಾಗೂ ಸಂಸ್ಕೃತಿ ಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯೆಯಿಟ್ಟು ಉತ್ತರಿಸುವರೆ :—

ಅ) ೩, ೫ ಮತ್ತು ೮ನೇ ತರಗತಿಗಳಿಗೆ ಪಠ್ಯ ಪುಸ್ತಕಗಳನ್ನು ಈ ವರ್ಷದಿಂದ ಬದಲಾವಣೆ ಮಾಡಲು ಸರ್ಕಾರ ಆಲೋಚಿಸಿದೆಯೇ?

ಆ) ಹಾಗಿದ್ದಲ್ಲಿ ಬದಲಾವಣೆಯನ್ನು ಎಂದು ಮಾಡಲಾಗುವುದು.

ಇ) ಈಗಾಗಲೇ ಶಾಲೆಗಳು ಪ್ರಾರಂಭವಾಗಿದ್ದು ವಿದ್ಯಾರ್ಥಿಗಳಿಗೆ ಪುಸ್ತಕಗಳು ದೊರಕದೆ ತೊಂದರೆಯಾಗುವುದರಿಂದ, ಈ ಬಗ್ಗೆ ಸರ್ಕಾರದವರು ಕೈಗೊಂಡಿರುವ ಕ್ರಮಗಳೇನು?

ಶ್ರೀ ಕೆ. ಹೆಚ್. ರಂಗನಾಥ್ (ಶಿಕ್ಷಣ, ಯುವಜನ ಸೇವೆ, ಕ್ರೀಡೆ, ಕನ್ನಡ ಮತ್ತು ಸಂಸ್ಕೃತಿ ಮಂತ್ರಿಗಳು).—

ಅ) ಇಲ್ಲ.

ಆ) ಕೇಂದ್ರ ಸರ್ಕಾರ ಶಿಕ್ಷಣ ನೀತಿಯಲ್ಲಿ ಬದಲಾವಣೆ ತರಲಿರುವುದನ್ನು ಅವಲಂಬಿಸಿದೆ.

ಇ) ಹಳೆಯ ಪಠ್ಯ ಪುಸ್ತಕಗಳನ್ನು ಪುನರ್ ಮುದ್ರಿಸಿ ಒದಗಿಸಲಾಗಿದೆ

ಸಾರ್ವಜನಿಕ ಗ್ರಂಥಾಲಯಕ್ಕೆ ಪುಸ್ತಕಗಳನ್ನು ಪೂರೈಸುವ ಬಗ್ಗೆ

೭೬೫ (೧೪೨೬) ಶ್ರೀ ಶಿವಾನಂದ ಹೆಚ್. ಕೌಜಲಗಿ (ಬೈಲಹೊಂಗಲ).—ಮಾನ್ಯ ಶಿಕ್ಷಣ, ಯುವಜನ ಸೇವೆ, ಕ್ರೀಡೆ, ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯೆಯಿಟ್ಟು ಉತ್ತರಿಸುವರೇ :—

ಅ) ೧೯೮೮–೮೯, ೧೯೮೯–೯೦ನೇ ಸಾಲುಗಳಲ್ಲಿ ಎಷ್ಟು ಮೌಲ್ಯದ ಪುಸ್ತಕಗಳನ್ನು ಖರೀದಿಸಿ ಸಾರ್ವಜನಿಕ ಗ್ರಂಥಾಲಯಕ್ಕೆ ಪೂರೈಸಲಾಗಿದೆ.

(ಜಿಲ್ಲಾವಾರು ಹಾಗೂ ತಾಲ್ಲೂಕುವಾರು ವಿವರಗಳನ್ನೊದಗಿಸುವುದು)

ಆ) ರಾಜ್ಯದಲ್ಲಿ ೧೯೮೮–೮೯, ೧೯೮೯–೯೦ನೇ ಸಾಲುಗಳಲ್ಲಿ ಸಾರ್ವಜನಿಕರಿಂದ ದೇಣಿಗೆಯಾದ ಗ್ರಂಥಾಲಯ ಸುಂಕದ ಮೊತ್ತವೆಷ್ಟು ?